**ತಾಲ್ಲೂಕು ಮಟ್ಟದ ಗ್ರಂಥಾಲಯಗಳಿಗೆ ಸ್ವಂತ ಕಟ್ಟಡ**

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 21 (3)

ಸದಸ್ಯರ ಹೆಸರು : ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ (ಕುಷ್ಟಗಿ)

ಉತ್ತರಿಸುವ ಸಚಿವರು : ಶ್ರೀ ರೇವುನಾಯಕ್ ಬೆಳಮಗಿ (ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು)

**ಪ್ರಶ್ನೆಗಳು:**

ಅ) ಕೊಪ್ಪಳ ಜಿಲ್ಲೆಯ ಕುಷ್ಟಗಿ ಪಟ್ಟಣದಲ್ಲಿ ತಾಲ್ಲೂಕು ಮಟ್ಟದ ಗ್ರಂಥಾಲಯ ಅಸ್ತಿತ್ವದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಎಷ್ಟು ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ.

ಇ) ಸದರಿ ಗ್ರಂಥಾಲಯಕ್ಕೆ ಸ್ವಂತ ಕಟ್ಟಡವನ್ನು ನಿರ್ಮಾಣ ಮಾಡಲು ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ?

ಈ) ಅನುದಾನವನ್ನು ಬಿಡುಗಡೆ ಮಾಡದಿದ್ದಲ್ಲಿ ಅದಕ್ಕೆ ಕಾರಣಗಳೇನು, ಯಾವಾಗ ಅನುದಾನವನ್ನು ಬಿಡುಗಡೆ ಮಾಡಲಾಗುವುದು?

**ಉತ್ತರಗಳು:**

ಅ) ಬಂದಿದೆ.

ಆ) ಇಬ್ಬರು

ಇ) ಇಲ್ಲ

ಈ) ಸದರಿ ಗ್ರಂಥಾಲಯವು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. ಸ್ವಂತ ಕಟ್ಟಡ ನಿರ್ಮಿಸಲು ನಿವೇಶನ ಒದಗಿಸುವಂತೆ ಪಟ್ಟಣ ಪಂಚಾಯಿತಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ನಿವೇಶನ ಒದಗಿಸಿದ ನಂತರ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದು.

(ಗೊಂದಲ)

**ಉಪಾಧ್ಯಕ್ಷರು:–** ಮಾನ್ಯ ಪಶು ಸಂಗೋಪನಾ ಸಚಿವರು ಉತ್ತರ ಕೊಡಿ.

**ಶ್ರೀ ರೇವುನಾಯಕ್ ಬೆಳಮಗಿ:–** ಮಾನ್ಯ ಅಧ್ಯಕ್ಷರೆ, ಉತ್ತರ ಒದಗಿಸಿದ್ದೇನೆ.

**ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ:–** ಸಚಿವರು ಉತ್ತರವನ್ನು ಕೊಟ್ಟಿದ್ದಾರೆ.

**ಉಪಾಧ್ಯಕ್ಷರು:–** ತಾರತಮ್ಯ ಆಗದ ರೀತಿಯಲ್ಲಿ ಕ್ರಮ ಕೈಗೊಳ್ಳುವಂತೆ ಹೇಳಲಾಗಿದೆ.

**ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ:–** ಅನುದಾನವನ್ನು ಬಿಡುಗಡೆ ಮಾಡಲಾಗುವುದೇ ಎಂದು ಕೇಳಿದಾಗ, ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದೆ. ಗ್ರಂಥಾಲಯಗಳಿಗೆ ನಿವೇಶನವನ್ನು ಒದಗಿಸುವಂತೆ ಕೋರಿದ್ದಾರೆ. ಈಗಾಗಲೇ ನಿವೇಶನವನ್ನು ಪಟ್ಟಣ ಪಂಚಾಯಿತಿಯಿಂದ ಒದಗಿಸಲಾಗಿದೆ. ದಯವಿಟ್ಟು ಮಾನ್ಯ ಸಚಿವರು ಈ ಒಂದು ತಾಲ್ಲೂಕು ಮಟ್ಟದ ಗ್ರಂಥಾಲಯವನ್ನು ನಿರ್ಮಾಣ ಮಾಡಲು ಅದಕ್ಕೆ ಬೇಕಾದಂತಹ ಅನುದಾನವನ್ನು ಒದಗಿಸಬೇಕೆಂದು ತಮ್ಮ ಮೂಲಕ ಮಾನ್ಯ ಸಚಿವರಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ.

**ಶ್ರೀ ರೇವುನಾಯಕ್ ಬೆಳಮಗಿ:–** ಗೌರವಾನ್ವಿತ ಸದಸ್ಯರು ಕೇಳಿರುವ ಗ್ರಂಥಾಲಯವು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಸ್ವಂತ ಕಟ್ಟಡ ನಿರ್ಮಿಸಲು ನಿವೇಶನ ಒದಗಿಸುವಂತೆ ಪಟ್ಟಣ ಪಂಚಾಯಿತಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ನಿವೇಶನ ಕೊಟ್ಟಿದ್ದೇವೆ ಎಂದು ಹೇಳಿದ್ದಾರೆ. ಅದರ documents ರೆಡಿ ಮಾಡಿ ಕೊಟ್ಟರೆ next ಆಯವ್ಯಯದಲ್ಲಿ ಸೇರಿಸಿ sanction ಮಾಡಿಕೊಡುತ್ತೇನೆ.

**ಉಪಾಧ್ಯಕ್ಷರು:–** ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡರ ಪ್ರಶ್ನೆಗೆ ಮಾನ್ಯ ಸಚಿವರು 30 ದಿನಗಳ ಕಾಲಾವಕಾಶವನ್ನು ಕೋರಿದ್ದಾರೆ.